**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ/578/ಗ್ರಾಪಂಕಾ/2015

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 28-01-2019

ಇವರಿಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
**ಬೆಂಗಳೂರು..**

ಇವರಿಗೆ:

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಎಲ್ಲಾ ಜಿಲ್ಲಾ ಪಂಚಾಯತಿಗಳು.

ಮಾನ್ಯರೆ,

**ವಿಷಯ:** ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳ ನೇರ ನೇಮಕಾತಿಗೆ ಸಂಬಂಧಿಸಿದಂತೆ ಶೇ 25 ರಷ್ಟು ಹೆಚ್ಚುವರಿ ಆಯ್ಕೆ ಪಟ್ಟಿ ಪ್ರಕಟಿಸಿರುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಸಮಸಂಖ್ಯೆಯ ಆದೇಶ, ದಿನಾಂಕ 30.06.2016.
2. ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಪ್ರಕಟಿಸಿರುವ ಜಿಲ್ಲಾವಾರು ಆಯ್ಕೆ ಪಟ್ಟಿ ದಿನಾಂಕ 01.03.2018.
3. ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಪ್ರಕಟಿಸಿರುವ ಜಿಲ್ಲಾವಾರು ಹೆಚ್ಚುವರಿ ಆಯ್ಕೆ ಪಟ್ಟಿ ದಿನಾಂಕ: 10.01.2019(ವೆಬ್ ಸೈಟಿನಲ್ಲಿ ಪ್ರಕಟಿಸಿರುವ ದಿನಾಂಕ 17.01.2019)
4. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಇವರ ಪತ್ರ ಸಂಖ್ಯೆ KEA/RECT.83/2019, ದಿನಾಂಕ 24.01.2019.

----

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ದಿನಾಂಕ 10.01.2019(ವೆಬ್ ಸೈಟಿನಲ್ಲಿ ಪ್ರಕಟಿಸಿರುವ ದಿನಾಂಕ 17.01.2019) ರಂದು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗೆ ಸಂಬಂಧಿಸಿದಂತೆ ಶೇ 25 ರಷ್ಟು ಹೆಚ್ಚುವರಿ ಆಯ್ಕೆ ಪಟ್ಟಿಯನ್ನು ಪ್ರಕಟಿಸಿರುತ್ತದೆ. ಸದರಿ ಪಟ್ಟಿಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವೆಬ್ ಸೈಟನಲ್ಲಿ ಕೂಡ ಪ್ರಕಟಿಸಲಾಗಿದೆ. ಸದರಿ ಪ್ರತಿಗಳನ್ನು ವೆಬ್ ಸೈಟಿನಿಂದ Download ಮಾಡಿಕೊಳ್ಳಬಹುದಾಗಿದೆ. ಹೆಚ್ಚುವರಿ ಆಯ್ಕೆ ಪಟ್ಟಿಯ ಅಭ್ಯರ್ಥಿಗಳ ನೇಮಕಾತಿಗೆ ಸಂಬಂಧಿಸಿದಂತೆ ದಿನಾಂಕ 01.04.2015 ರಂದು ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮ ಪಂಚಾಯತಿ ಗ್ರೇಡ್-1 ಹುದ್ದೆಗಳ ನೇಮಕಾತಿ ಸಂಬಂಧ ಹೊರಡಿಸಲಾಗಿರುವ ವಿಶೇಷ ನಿಯಮಗಳ ನಿಯಮ 8(2) ಈ ಕೆಳಕಂಡಂತಿರುತ್ತದೆ.

"ಮುಖ್ಯ ಆಯ್ಕೆ ಪಟ್ಟಿಯಲ್ಲಿ ಹೆಸರು ಸೇರಿರುವ ಅಭ್ಯರ್ಥಿಯು ನಿಗದಿತ ಅಥವಾ ವಿಸ್ತರಿತ ಅವಧಿಯ ಒಳಗೆ ಕರ್ತವ್ಯಕ್ಕೆ ಹಾಜರಾಗಲು ವಿಫಲನಾದಲ್ಲಿ, ಕರ್ತವ್ಯಕ್ಕೆ ಹಾಜರಾಗಲು

ವಿಫಲನಾದ ಅಭ್ಯರ್ಥಿಯು ಯಾವ ವರ್ಗಕ್ಕೆ ಸೇರಿದ್ದನೋ ಅದೇ ವರ್ಗದ ಮೀಸಲಾತಿಗೆ ಸೇರಿದ ಹೆಚ್ಚುವರಿ ಪಟ್ಟಿಯಲ್ಲಿರುವ ಅಭ್ಯರ್ಥಿಯನ್ನು ನೇಮಕಾತಿ ಪ್ರಾಧಿಕಾರವು ಅವಶ್ಯವೆನಿಸುವ ವಿಚಾರಣೆಯನ್ನು ನಡೆಸಿದ ನಂತರ ಸದರಿ ಅಭ್ಯರ್ಥಿಯು ನೇಮಕಾತಿ ಹೊಂದಲು ಸರ್ವ ರೀತಿಯಲ್ಲಿ ಅರ್ಹರಿರುವುದು ಕಂಡುಬಂದಲ್ಲಿ, ನೇಮಕಾತಿ ಪ್ರಾಧಿಕಾರವು ನೇಮಕಾತಿ ಮಾಡಿಕೊಳ್ಳತಕ್ಕದ್ದು. ಮುಖ್ಯ ಆಯ್ಕೆ ಪಟ್ಟಿಯಲ್ಲಿ ಭರ್ತಿಯಾಗದಿರುವ ಹುದ್ದೆಗಳಷ್ಟರ ಮಟ್ಟಿಗೆ ಮೀರದಂತೆ ಹೆಚ್ಚುವರಿ ಆಯ್ಕೆ ಪಟ್ಟಿಯಿಂದ ಅಭ್ಯರ್ಥಿಗಳನ್ನು ನೇಮಕಾತಿ ಮಾಡಿಕೊಳ್ಳಬಹುದು".

ಈ ಸಂಬಂಧ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಇವರು ಸರ್ಕಾರಕ್ಕೆ ಬರೆದಿರುವ ಉಲ್ಲೇಖ (4) ರ ಪತ್ರವನ್ನು ಇದರೊಂದಿಗೆ ಲಗತ್ತಿಸಿದೆ.

ಮುಖ್ಯ ಆಯ್ಕೆ ಪಟ್ಟಿಯಲ್ಲಿ ಆಯ್ಕೆಗೊಂಡ ಅಭ್ಯರ್ಥಿಗಳ ಪೈಕಿ ಆಯಾ ಜಿಲ್ಲಾ ಪಂಚಾಯತಿಗಳಲ್ಲಿ ಕರ್ತವ್ಯಕ್ಕೆ ಹಾಜರಾಗದ ಅಭ್ಯರ್ಥಿಗಳಿಗೆ ಬದಲಾಗಿ ಅದೇ ಪ್ರವರ್ಗದ ಅಭ್ಯರ್ಥಿಯನ್ನು ಹೆಚ್ಚುವರಿ ಪಟ್ಟಿಯಿಂದ ಆಯ್ಕೆ ಮಾಡಿ ಸದರಿ ಪಟ್ಟಿಯನ್ನು ಸರ್ಕಾರಕ್ಕೆ ಕಳುಹಿಸುವಂತೆ ಕೋರಿದೆ, ಹಾಗೂ ಸದರಿ ಆಯ್ಕೆಪಟ್ಟಿಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಪರಿಶೀಲಿಸಿ, ಆಯ್ಕೆ ಬಗ್ಗೆ ಅನುಮೋದನೆ ನೀಡಿದ ನಂತರ ನೇಮಕಾತಿಗೆ ಕ್ರಮವಹಿಸಲು ತಿಳಿಸಲಾಗುವುದು.

ತಮ್ಮ ವಿಶ್ವಾಸಿ,

28/1/19

(ಎಂ.ಕೆ. ಕೆಂಪೇಗೌಡ)
ನಿರ್ದೇಶಕರು (ಪಂ.ರಾಜ್-I) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಪ್ರತಿ:

ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು ಇವರಿಗೆ ಮಾಹಿತಿಗಾಗಿ